I/194865/2021

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/ 52/ಸಿಡಿಸಿ(2)/2021-22

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:08/12/2021.

**ಸುತ್ತೋಲೆ**

ವಿಷಯ: 2021-22 ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ., ಉನ್ನತ ವ್ಯಾಸಂಗದ ಸಲುವಾಗಿ ಕೆಇಎ, ಬೆಂಗಳೂರು ಇಲ್ಲಿ ದಾಖಲಾತಿ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22 ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ., ಉನ್ನತ ವ್ಯಾಸಂಗದ ಸಲುವಾಗಿ ಕೆಇಎ, ಬೆಂಗಳೂರು ಇದರ ಮೂಲಕ PGCET-2021 ಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ಇಲಾಖೆಯಿಂದ ಈಗಾಗಲೇ ನಿರಾಕ್ಷೇಪಣಾ ಪತ್ರ ಪಡೆದಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಿಭಾಗಗಳ ಉಪನ್ಯಾಸಕರುಗಳಿಗೆ PGCET-2021 ಗೆ ಸಂಬಂಧಿಸಿದಂತೆ, ಕೆಇಎ, ಬೆಂಗಳೂರು ಇಲ್ಲಿ ದಾಖಲಾತಿ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ಅನುಮತಿ ನೀಡಲಾಗಿದೆ.

ಮುಂದುವರೆದು, PGCET-2021 ಮುಖಾಂತರ 2021-22 ನೇ ಸಾಲಿನಲ್ಲಿ ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ., ಉನ್ನತ ವ್ಯಾಸಂಗಕ್ಕೆ ಆಯ್ಕೆಯಾಗುವ ಉಪನ್ಯಾಸಕರುಗಳನ್ನು ಕಡ್ಡಾಯವಾಗಿ ಕೆಸಿಎಸ್ ನಿಯಮ 61(3) ರ ಅಪೆಂಡಿಕ್ಸ್-2 "ಎ" ಅನ್ವಯ ನಿಯಮ 1 ಉಪನಿಯಮ (1) ರಿಂದ ಉಪನಿಯಮ (10) ರನ್ವಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಡಿಸಿ ನಿಯೋಜಿಸಲು ಕ್ರಮಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

**ಜಂಟಿ ನಿರ್ದೇಶಕರು(ಸಿಡಿಸಿ)**
**ತಾಂತ್ರಿಕ ಶಿಕ್ಷಣ ಇಲಾಖೆ.**

ಇವರಿಗೆ: ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ.

1) ಕಾರ್ಯನಿರ್ವಾಹಕ ನಿರ್ದೇಶಕರು, ಕೆಇಎ, ಬೆಂಗಳೂರು.
2) ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ.
3) ಇಲಾಖೆಯ ಇ-ಆಡಳಿತ ವಿಭಾಗಕ್ಕೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.